# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 1904(2233)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಗೋವಿಂದರಾಜು(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ವಿಷಯ : ಕೆ.ಎಸ್.ಆರ್.ಟಿ.ಸಿ. ಸಂಸ್ಥೆಯು ಅನುಭವಿಸುತ್ತಿರುವ ನಷ್ಟದ ಕುರಿತು

(ಅ) ಕೋವಿಡ್-19ರ ಹಿಂದಿನಿಂದಲೂ ಕೆ.ಎಸ್.ಆರ್.ಟಿ.ಸಿ. ಸಂಸ್ಥೆಯು ನಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು;

(ಆ) ಸದರಿ ಸಂಸ್ಥೆಯು ನಷ್ಟ ಹೊಂದಲು ಖಾಸಗಿ ವಾಹನಗಳ ಅನಧಿಕೃತ ಓಡಾಟವೆ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ ಅನಧಿಕೃತವಾಗಿ ಓಡಾಡುವ ಖಾಸಗಿ ವಾಹನಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಹಾಗೂ ಅವರುಗಳಿಂದ ವಸೂಲಾದ ದಂಡದ ಮೊತ್ತವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಜಿಲ್ಲಾ ಮಟ್ಟದಲ್ಲಿ ಖಾಸಗಿ ವಾಹನಗಳಿಗೆ ಪರವಾನಗಿ ನೀಡುವಾಗ ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು;

(ಊ) ಈ ಖಾಸಗಿ ವಾಹನಗಳು ಒಳ ರಸ್ತೆಗಳಲ್ಲಿ ಸಂಚರಿಸಲು ಪರವಾನಗಿ ಪಡೆದು ಮುಖ್ಯ ರಸ್ತೆಗಳಲ್ಲಿ ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಋ) ಹಾಗಿದ್ದಲ್ಲಿ, ಇಂತಹ ಎಷ್ಟು ಖಾಸಗಿ ವಾಹನಗಳ ಮೇಲೆ ಕ್ರಮಕೈಗೊಳ್ಳಲಾಗಿದೆ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಎ) ಕೆ.ಎಸ್.ಆರ್.ಟಿ.ಸಿ.ಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ನೌಕರರ ಸಂಖ್ಯೆ ಎಷ್ಟು; ಹಾಗೂ ಅಧಿಕಾರಿಗಳ ಸಂಖ್ಯೆ ಎಷ್ಟು; (ವೃಂದಗಳವಾರು ವಿವರ ನೀಡುವುದು)

(ಏ) ಕೋವಿಡ್-19ರ ನಂತರ ಇದುವರೆವಿಗೂ ಸಾರಿಗೆ ಸಂಸ್ಥೆಗಳ ಸಂಬಳ ಹಾಗೂ ಇತರೆ ವೆಚ್ಚಗಳಿಗೆ ಸರ್ಕಾರ ನೀಡಿರುವ ಮೊತ್ತವೆಷ್ಟು;

(ಐ) ಸಾರಿಗೆ ಸಂಖ್ಯೆ ಮತ್ತು ವಾಹನಗಳ ಪುನಃಶ್ಚೇತನಕ್ಕೆ ಸರ್ಕಾರ ಯಾವುದಾದರು ಕಾರ್ಯಕ್ರಮಗಳನ್ನು ರೂಪಿಸಿದೆಯೇ; ಹಾಗಿದ್ದಲ್ಲಿ, ಕಾರ್ಯಕ್ರಮಗಳ ರೂಪುರೇಷೆಗಳೇನು? (ಪ್ರತಿಯನ್ನು ಒದಗಿಸುವುದು)